ತುಮಕೂರು ಜಿಲ್ಲೆ ಬುಕ್ಕಾ ಪಟ್ಟಣ ಹೋಬಳಿ ಕಿಲಾರದಹಳ್ಳಿ ಕೆರೆ ನಿರ್ಮಾಣಕ್ಕೆ ಅರಣ್ಯ ಭೂಮಿ ಮಂಜೂರು.

2871:(3924)

ಶ್ರೀ ಟಿ.ಬಿ.ಜಯಚಂದ್ರ (ಕಳ್ಳಬೆಳ್ಳ): ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ಬುಕ್ಕಾಪಟ್ಟಣ ಹೋಬಳಿ ಕಿಲಾರದಹಳ್ಳ ಬಳಿ ಕೆರೆ ನಿರ್ಮಾಣಕ್ಕೆ ಮತ್ತು ಚಿಕ್ಕಸಂದ್ರ ಕಾದಿಟ್ಟ ಅರಣ್ಯ ಪ್ರದೇಶದಲ್ಲಿ 66 ಕೆ.ವಿ. ಕೆ.ಇ.ಬಿ. ಲೈನ್ ಎಳೆಯಲು ಅರಣ್ಯ ಜಮೀನು ಬಿಡುಗಡೆಗೆ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಅರಣ್ಯ ಜಮೀನು ಬಿಡುಗಡೆಯಾಗುವಲ್ಲಿ ವಿಳಂಬವಾಗುತ್ತಿರುವ ಕಾರಣ, ಕಾಮಗಾರಿಗಳು ಸ್ಥಗಿತವಾಗಿರುವುದು ನಿಜವೇ?

ಇ) ಹಾಗಿದ್ದಲ್ಲಿ, ಕೂಡಲೇ ಈ ಬಗ್ಗೆ ಸರ್ಕಾರವು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಡಿ.ಮಂಜುನಾಥ್ (ಅರಣ್ಯ ಸಚಿವರು):

ಅ) ಬಂದಿದೆ.

ಆ) ಹೌದು.

ಇ) ಅರಣ್ಯ (ಸಂರಕ್ಷಣಾ) ಕಾಯಿದೆ 1980ರ ಪ್ರಕಾರ, ಯಾವುದೇ ಅರಣ್ಯ ಭೂಮಿಯನ್ನು ಅರಣ್ಯೇತರ ಉದ್ದೇಶಕ್ಕಾಗಿ ಬಿಡುಗಡೆ ಮಾಡಬೇಕಾಗಿದ್ದಲ್ಲಿ, ಕೇಂದ್ರ ಸರ್ಕಾರದ ಪೂರ್ವಾನುಮತಿಯನ್ನು ಪಡೆಯಬೇಕಾಗುತ್ತದೆ. ಕೇಂದ್ರ ಸರ್ಕಾರದ ಪೂರ್ವಾನುಮತಿ ಪಡೆಯದ ಹೊರತು ಅರಣ್ಯ ಭೂಮಿಯನ್ನು ಅರಣ್ಯೇತರ ಉದ್ದೇಶಗಳಿಗಾಗಿ ಬಳಸಲು ಕಾನೂನು ಪ್ರಕಾರ ಆಸ್ಪದವಿರುವುದಿಲ್ಲ. ಕಿಲಾರಹಳ್ಳಿ ಕೆರೆ ನಿರ್ಮಾಣಕ್ಕೆ ಮತ್ತು ಚಿಕ್ಕಸಂದ್ರ ಕಾದಿಟ್ಟ ಅರಣ್ಯ ಪ್ರದೇಶದಲ್ಲಿ 66 ಕೆ.ವಿ. ಕೆ.ಇ.ಬಿ. ಲೈನ್ ಎಳೆಯಲು ಅರಣ್ಯ ಭೂಮಿ ಬಿಡುಗಡೆಗೆ ಸಂಬಂಧಿಸಿದ ಪ್ರಸ್ತಾವನೆಗಳನ್ನು ಕೇಂದ್ರ ಸರ್ಕಾರದ ಅನುಮೋದನೆ ಪಡೆಯಲು ಸಲ್ಲಿಸಲಾಗಿದೆ. ಕೇಂದ್ರ ಸರ್ಕಾರದ ಅನುಮೋದನೆ ಬಂದನಂತರ, ಅರಣ್ಯ ಜಮೀನನ್ನು ಬಿಡುಗಡೆ ಮಾಡಲು ಮುಂದಿನ ಕ್ರಮವನ್ನು ಕೈಗೊಳ್ಳಲಾಗುವುದು.